ಬಯಲು ಸೀಮೆ ಪ್ರದೇಶಾಭಿವೃದ್ಧಿ.

597(875)

ಶ್ರೀ ಜಿ.ಟಿ.ಪಾಟೀಲ್(ಬೀಳಗಿ): ಮಾನ್ಯ ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಯಲುಸೀಮೆ ಅಭಿವೃದ್ಧಿ ನಿಗಮಕ್ಕೆ 2001-2002ನೇ ಆಯವ್ಯಯದಲ್ಲಾದರೂ ಹೆಚ್ಚಿನ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಆ) ಹೈದರಾಬಾದ್-ಕರ್ನಾಟಕ ಹಾಗೂ ಮಲೆನಾಡು ಅಭಿವೃದ್ಧಿ ಮಂಡಳಿಗೂ ಹೆಚ್ಚಿನ ಹಣಕಾಸಿನ ಬಿಡುಗಡೆಗಾಗಿ ಕ್ರಮ ಕೈಗೊಳ್ಳಲಾಗುವುದೇ.

ಶ್ರೀ ಬಿ.ರಮಾನಾಥ ರೈ (ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು):

ಅ) ಆಯವ್ಯಯ ಮಂಡಿಸಿದ ನಂತರ ತಿಳಿಯಲಾಗುವುದು.

ಆ) ಅದೇ.

ರಾಜ್ಯದಲ್ಲಿ ಪರಿಸರ ಮಾಲಿನ್ಯ.

598(877)

ಶ್ರೀ ಪಾಟೀಲ್ ಜೆ.ಟಿ. (ಬೀಳಗಿ): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿ ದಿನದಿಂದ ದಿನಕ್ಕೆ ಪರಿಸರ ಮಾಲಿನ್ಯ ಅತೀ ಹೆಚ್ಚಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು?

ಆ. ಜನರ ಆರೋಗ್ಯವನ್ನು ಕಾಪಾಡುವುದು ಸರ್ಕಾರದ ಕರ್ತವ್ಯವಲ್ಲವೆ? ಈ ದಿಶೆಯಲ್ಲಿ ವ್ಯಾಪಕವಾದಂಥ ಕ್ರಮ ಕೈಗೊಂಡು ದೇಶದಲ್ಲಿಯೇ ಮಾಲಿನ್ಯ ರಹಿತ ರಾಜ್ಯವನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ